ಆ) ಸದರಿ ಯೋಜನೆಯ ಅಂದಾಜು ಮೊತ್ತವು ರೂ. 615.00 ಲಕ್ಷಗಳು

ಇ) ಈ ಯೋಜನೆಗೆ ಇದುವರೆವಿಗೂ ರೂ. 109.52 ಲಕ್ಷಗಳು ಬಿಡುಗಡೆಯಾಗಿದ್ದೂ ರೂ.123.95 ಲಕ್ಷ ರೂ. ಗಳನ್ನು ವೆಚ್ಚ ಮಾಡಲಾಗಿದೆ.

ಈ) ಈ ಯೋಜನೆಗೆ ಬೇಕಾಗುವ ನಿವೇಶನದ ಭೂಸ್ವಾಧೀನ ಕೆಲಸ ನಿಗದಿತ ಸಮಯಕ್ಕೆ ಮುಗಿದಲ್ಲಿ ಜಲಶುದ್ಧೀಕರಣಗಾರ ಕೆಲಸವನ್ನು ಸೇರಿಸಿ ಯೋಜನೆಯನ್ನು ಎರಡು ವರ್ಷಗಳಲ್ಲಿ ಚಾಲ್ತಿ ಮಾಡಬಹುದಾಗಿದೆ.

ಐ.ಡಿ.ಎಸ್.ಎಂ.ಟಿ. ಯೋಜನೆಯ ಅನುಷ್ಠಾನ

457 (762) ಶ್ರೀ ಹೆಚ್.ಎಸ್. ಮಹಾದೇವ ಪ್ರಸಾದ್ (ಗುಂಡ್ಲುಪೇಟೆ):- ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈವರೆಗೆ ಐ.ಡಿ.ಎಸ್.ಎಂ.ಟಿ. ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಪುರ ಸಭೆಗಳನ್ನು ಸೇರಿಸಲಾಗಿದೆ?

ಆ) 1996-97ನೇ ಸಾಲಿನಲ್ಲಿ ಎಷ್ಟು ಪುರ ಸಭೆಗಳನ್ನು ಸೇರಿಸಲಾಗಿದೆ? ಅವು ಯಾವುವು?

ಇ) ಈ ಯೋಜನೆಗೆ ಸೇರಿಸಲು ಅನುಸರಿಸುತ್ತಿರುವ ನಿಯಮಗಳೇನು?

ಶ್ರೀ ಮೀರಾಜುದ್ದೀನ್ ಎನ್ ಪಟೇಲ್ (ಪೌರಾಡಳಿತ ರಾಜ್ಯ ಸಚಿವರು)

ಅ) 45

ಆ) 2

(1) ಹೊಳೇನರಸೀಪುರ

(2) ಮುದ್ದೇಬಿಹಾಳ

ಇ) 1995ರಲ್ಲಿ ಕೇಂದ್ರ ಸರ್ಕಾರ ಹೊರಡಿಸಿದ ಪರಿಷ್ಕೃತ ಮಾರ್ಗಸೂಚಿಗಳನ್ವಯ ಪಟ್ಟಣಗಳನ್ನು ಆಯ್ಕೆ ಮಾಡಲಾಗುತ್ತಿದೆ.

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಸ್ಥಾಪಿಸಲಿರುವ ಕೈಗಾರಿಕೆಗಳು

458 (761) ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಗುಂಡ್ಲುಪೇಟೆ):- ಮಾನ್ಯ ಸಣ್ಣ ಪ್ರಮಾಣ ಕೈಗಾರಿಕೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಬೇಗೂರು ಗ್ರಾಮದಲ್ಲಿ ಕರ್ನಾಟಕ ರಾಜ್ಯ ತೆಂಗು ಮತ್ತು ನಾರು ಅಭಿವೃದ್ಧಿ ಮಂಡಲಿ ವತಿಯಿಂದ ಕೈಗಾರಿಕೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆಯೇ?

ಆ) ಹಾಗಿದ್ದಲ್ಲಿ, ಈ ವರೆವಿಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ.ಎ. ಮೊಹಿದ್ದೀನ್ (ಸಣ್ಣ ಪ್ರಮಾಣ ಕೈಗಾರಿಕೆಗಳ ಸಚಿವರು)

ಅ) ಹೌದು.

ಆ) ಈಗಾಗಲೇ 4 ಎಕರೆ ಸರ್ಕಾರಿ ಜಮೀನು ಖರೀದಿಸಲಾಗಿದೆ. ಸಿದ್ದವಸ್ತುಗಳ ತಯಾರಿಕಾ ಘಟಕವನ್ನು ಸ್ಥಾಪಿಸಲು ಕಟ್ಟಡ ಕಟ್ಟಡಲು ಕ್ರಮಕೈಗೊಳ್ಳಲಾಗಿದೆ.

ದರ ಗುತ್ತಿಗೆ ಆಧಾರದಲ್ಲಿ ಕಳಪೆ ಮಟ್ಟದ ಸೊತ್ತುಗಳ ಖರೀದಿ

460 (496) ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ):- ಮಾನ್ಯ ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಮತ್ತು ಮೂಲಭೂತ ಸೌಕರ್ಯಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದರ ಗುತ್ತಿಗೆ ಆಧಾರದಲ್ಲಿ ಸಂಸ್ಥೆಗಳಿಂದ ವಿವಿಧ ಇಲಾಖೆಗಳಿಗೆ ಕೋಟ್ಯಾಂತರ ರೂಪಾಯಿಗಳ ಕಳಪೆ ಮಟ್ಟದ ಸೊತ್ತುಗಳನ್ನು ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ತೆಗೆದುಕೊಂಡ ಕ್ರಮ ಏನು?

ಇ) ಹಾಗಿಲ್ಲದಿದ್ದಲ್ಲಿ ಸರಕಾರವು ಈ ಬಗ್ಗೆ ಗಮನ ಹರಿಸಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಮತ್ತು ಮೂಲಭೂತ ಸೌಕರ್ಯಗಳ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾವಿ ಜಿಲ್ಲೆಯಲ್ಲಿರುವ ಸಕ್ಕರೆ ಕಾರ್ಖಾನೆಗಳಲ್ಲಿನ ಹೆಚ್ಚಿನ ಕಬ್ಬನ್ನು ಮಹಾರಾಷ್ಟ್ರಕ್ಕೆ ಕಳುಹಿಸುವ ಬಗ್ಗೆ

461 (763) ಶ್ರೀ ಬಿ.ಐ. ಪಾಟೀಲ್ (ಉಚ್ಛಂಗವ್):- ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಬೆಳಗಾಂ ಮತ್ತು ಖಾನಾಪುರ ತಾಲ್ಲೂಕುಗಳಲ್ಲಿರುವ ಹೆಚ್ಚುವರಿ ಕಬ್ಬಿನ ಪ್ರಮಾಣ ಎಷ್ಟು?